500 ಮನೆಗಳನ್ನು ನಿರ್ಮಿಸುವುದಿಲ್ಲವೋ ಆ ಕ್ಷೇತ್ರದಲ್ಲಿ ಉಳಿದ ಮನೆಗಳನ್ನು ಜಿಲ್ಲಾಧಿಕಾರಿಯವರಿಂದ ನಿರ್ಮಿಸಲು ನಿರ್ಧರಿಸಿದೆ.

**ಹೊನ್ನಾವರ ತಾಲ್ಲೂಕಿನಲ್ಲಿ ಅಂಗನವಾಡಿ ಕಾರ್ಯಕ್ರಮ ಜಾರಿ.**

1004-ಶ್ರೀ ಆರ್.ಎನ್. ನಾಯ್ಕ (ಭಟ್ಕಳ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

*1) ರಾಜ್ಯದ ಎಷ್ಟು ತಾಲ್ಲೂಕುಗಳಲ್ಲಿ ಅಂಗನವಾಡಿ ಕಾರ್ಯಕ್ರಮ ಜಾರಿಯಲ್ಲಿರುವುದು?*

*2) ಉತ್ತರ ಕನ್ನಡ ಜಿಲ್ಲೆಯ ಯಾವ ಯಾವ ತಾಲ್ಲೂಕುಗಳಲ್ಲಿ ಅಂಗನವಾಡಿ ಕಾರ್ಯಕ್ರಮ ಜಾರಿಯಲ್ಲಿದೆ?*

*3) ಹೊನ್ನಾವರ ತಾಲ್ಲೂಕಿನಲ್ಲಿ ಅಂಗನವಾಡಿ ಕಾರ್ಯಕ್ರಮ ಜಾರಿಗೊಳಿಸಲು ಸರ್ಕಾರದವರಿಗೆ ಇರುವ ತೊಂದರೆಗಳೇನು*

ಶ್ರೀ ಧರ್ಮಸಿಂಗ್ (ಸಮಾಜ ಕಲ್ಯಾಣ ಸಚಿವರು)

ಅ) ರಾಜ್ಯದ 133ತಾಲ್ಲೂಕುಗಳಲ್ಲಿ ಐಸಿಡಿಎಸ್ ಕಾರ್ಯಕ್ರಮ ಜಾರಿಯಲ್ಲಿರುವುದು.

ಆ) ಸೂಫ, ಯಲ್ಲಾಪುರ, ಕಾರವಾರ, ಅಂಕೋಲ, ಕುಮಟಾ ಹಾಗೂ ಭಟ್ಕಳ ತಾಲ್ಲೂಕುಗಳಲ್ಲಿ ಐಸಿಡಿಎಸ್ ಕಾರ್ಯಕ್ರಮ ಜಾರಿಯಲ್ಲಿದೆ.

ಇ) ಈ ಯೋಜನೆಯನ್ನು ಕೇಂದ್ರ ಸರ್ಕಾರದವರೇ ಮಂಜೂರು ಮಾಡುತ್ತಾರೆ. ಕೇಂದ್ರ ಸರ್ಕಾರದಿಂದ ಹೊನ್ನಾವರ ಐಸಿಡಿಎಸ್ ಯೋಜನೆ ಇದುವರೆಗೂ ಮಂಜೂರಾಗಿಲ್ಲವೆಂದು ಕಾರ್ಯಕ್ರಮವನ್ನು ಜಾರಿಗೊಳಿಸಲಾಗಿಲ್ಲ.

ಹೊನ್ನಾವರ ತಾಲ್ಲೂಕೂ ಸೇರಿದಂತೆ ಇನ್ನೂ ಮಂಜೂರಾಗದೆ ಇರುವ ರಾಜ್ಯದ ಎಲ್ಲಾ ತಾಲ್ಲೂಕುಗಳ ಮಾಹಿತಿಯನ್ನು ಕೇಂದ್ರ ಸರಕಾರದ ಪರಿಶೀಲನೆಗಾಗಿ ದಿನಾಂಕ 17-7-90ರಂದು ಕಳುಹಿಸಲಾಗಿದೆ. ಕೇಂದ್ರ ಸರಕಾರದ ಮಂಜೂರಾತಿ ದೊರೆತ ಮೇಲೆ ಇಲ್ಲೂ ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಸಾಧ್ಯವಾಗುತ್ತದೆ.

**ಆಶ್ರಮ ಯೋಜನೆಯಲ್ಲಿ ನಿರ್ಮಿಸಲಾದ ಮನೆಗಳ ಸಂಖ್ಯೆ.**

1033-ಶ್ರೀ ಮನೋಹರ ಐನಾಪುರ, (ಬೆಳ್ಳೋಳ್ಳಿ): ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

*ಅ) ಆಶ್ರಮ ಯೋಜನೆಯಡಿ ರಾಜ್ಯದಲ್ಲಿ ಇದುವರೆವಿಗೂ ನಿರ್ಮಿಸಲಾದ ಮನೆಗಳ ಸಂಖ್ಯೆ ಎಷ್ಟು?*

*ಆ) 1994.95ರೊಳಗೆ ಈ ಮನೆಗಳನ್ನು ಪೂರ್ಣಗೊಳಿಸಲು ಸರ್ಕಾರವು ತೆಗೆದುಕೊಂಡಿರುವ ಕ್ರಮವೇನು?*

ಶ್ರೀ ಗೋಪಿನಾಥ್ ಆರ್. ಸಾಂಡ್ರಾ (ವಸತಿ ಸಚಿವರು)

ಅ) 1044 ಮನೆಗಳು.

ಆ) ಸರ್ಕಾರದ ಆದೇಶ ಸಂಖ್ಯೆ ಹೆಚ್‌ಯುಡಿ 352 ಕೆಹೆಚ್‌ಬಿ 92 ದಿನಾಂಕ 15:12:92 ರ ಪ್ರಕಾರ ಕರ್ನಾಟಕ ಗೃಹ ಮಂಡಳಿ ಗುತ್ತಿಗೆದಾರರಿಗೆ ಮುಂಗಡವಾಗಿ ನೀಡಿರುವ ಮೊತ್ತಕ್ಕೆ ಸೀಮಿತವಾಗಿ ಆಶ್ರಯ ಮನೆಗಳನ್ನು ಪೂರ್ತಿ ಮಾಡುವಂತೆಯೂ

ಮತ್ತು ಉಳಿದವುಗಳನ್ನು ಜಿಲ್ಲಾಧಿಕಾರಿಗಳ ಮೂಲಕ ನಿರ್ಮಿಸಲು ಸರ್ಕಾರ ನಿರ್ಧರಿಸಿದೆ.

**ಬೆಂಗಳೂರು ಮಹಾನಗರ ಪಾಲಿಕೆ ಪರಿಸ್ಥಿತಿ ಕುರಿತು.**

1076-ಶ್ರೀ ಎ.ಕೆ. ಅನಂತಕೃಷ್ಣ (ಶಿವಾಜಿನಗರ) : ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಬೆಂಗಳೂರು ಮಹಾನಗರ ಪಾಲಿಕೆಯು ಆರ್ಥಿಕ ಸಂದಿಗ್ಧ ಪರಿಸ್ಥಿತಿಯನ್ನು ಅನುಭವಿಸುತ್ತಿರುವುದು ಹಾಗೂ ಅದರಿಂದಾಗಿ ಸಾಧಾರಣ ನಿರ್ವಹಣೆ ಮತ್ತು ಅಭಿವೃದ್ಧಿ ಕಾರ್ಯಕ್ರಮಗಳನ್ನು ಸಹ ತೆಗೆದುಕೊಳ್ಳಲಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ನಗರಪಾಲಿಕೆಯ ಆರ್ಥಿಕ ಪರಿಸ್ಥಿತಿಯನ್ನು ಉತ್ತಮಗೊಳಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮವೇನು?*

ಶ್ರೀ ಚೌಡರೆಡ್ಡಿ (ನಗರಾಭಿವೃದ್ಧಿ ಸಚಿವರು)

ಅ) ಇಲ್ಲ.

ಆ) ಮೇಲಿನ ಪ್ರಶ್ನೆಗೆ ನೀಡಿರುವ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

**ಬೆಳಗಾಂ ಜಿಲ್ಲೆ ಬೈಲಹೊಂಗಲ ತಾಲ್ಲೂಕು ಪೈಕಿ ತೋರ್ಕರಸಿಹಳ್ಳಿ ಗ್ರಾಮದಲ್ಲಿ ಬಿ.ಸಿ.ಎಂ. ಹಾಸ್ಟೆಲ್ ಮಂಜೂರು.**

1081-ಶ್ರೀ ಶಿವಾನಂದ ಹೆಚ್. ಕೌಜಲಗಿ (ಬೈಲಹೊಂಗಲ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಬೆಳಗಾಂ ಜಿಲ್ಲೆ ಬೈಲಹೊಂಗಲ ವಿದ್ಯಾರ್ಥಿಗಳಿಗೆ ತೋರ್ಕರಸಿಹಳ್ಳಿ ಗ್ರಾಮದಲ್ಲಿ ಸರ್ಕಾರಿ ಪ್ರೌಢ ಶಾಲೆ ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಈ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿಗಳಿಗೆ ಹಾಸ್ಟೆಲ್ ಸೌಲಭ್ಯ ಇಲ್ಲದೇ ತೊಂದರೆಯಾಗುತ್ತಿರುವ ಸಂಗತಿ ಸರ್ಕಾರದವರ ಗಮನಕ್ಕೆ ಬಂದಿದೆಯೆ.*

ಇ) *ಹಾಗಿದ್ದಲ್ಲಿ, ಅಲ್ಲಿ ಹಿಂದುಳಿದ ವರ್ಗಗಳ ಪೈಕಿ ಪ್ರಾರಂಭಿಸಲು ಸರ್ಕಾರದವರು ಕ್ರಮ ಕೈಗೊಳ್ಳುವರೆ?*

ಶ್ರೀ ಧರ್ಮಸಿಂಗ್ (ಸಮಾಜ ಕಲ್ಯಾಣ ಸಚಿವರು)

ಅ) ಹೌದು.

ಆ) ಇಲ್ಲ.

ಇ) ಅದ ಉತ್ತರದಿಂದ ಉದ್ಭವಿಸುವುದಿಲ್ಲ.

**ಹೋಟೆಲ್ ಬಾಲ ಕಾರ್ಮಿಕರಿಗೆ ಕೆಲಸಕ್ಕೆ ತೆಗೆದುಕೊಳ್ಳುತ್ತಿರುವ ಬಗ್ಗೆ.**

1082-ಶ್ರೀ ಶಿವಾನಂದ ಹೆಚ್. ಕೌಜಲಗಿ (ಬೈಲಹೊಂಗಲ) : ಮಾನ್ಯ ಕಾರ್ಮಿಕ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?